## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ನವದೆಹಲಿಯಲ್ಲಿ ದಿನಾಂಕ:08.05.2014ರಂದು ನಡೆದ ಸಭೆಗೆ ಹಾಜರಾಗಲು ವಿಮಾನಯಾನ ಪ್ರಯಾಣ ಭತ್ಯೆ ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ:-
1. ಭಾರತ ಸರ್ಕಾರದ ಅರೆ ಸರ್ಕಾರಿ ಪತ್ರ ಸಂಖ್ಯೆ:G-11011/2/2014/Water, Dt:17.04.2014.
2. ಸರ್ಕಾರದ ಆದೇಶ ಸಂಖ್ಯೆ:RDP:181:ZPA:2014 ದಿ:06.05.2014.
3. ಮುಖ್ಯ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಬೆಂಗಳೂರುರವರ ಪತ್ರ ಸಂಖ್ಯೆ:ಮುಇಂ/ಪಂರಾಇಂಇ/ಬೆಂ/ಸಿ-17/2014-15 ದಿ:03.09.2014.

---

**ಪೀಠಿಕೆ:**

ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯ ಸಂಬಂಧ ದಿನಾಂಕ:08.05.2014ರಂದು ನವದೆಹಲಿಯಲ್ಲಿ ನಡೆದ ಸಭೆಗೆ ಹಾಜರಾಗಲು ಶ್ರೀ ಎಂ.ಜಿ. ನಾಗೇಶ್ವರರಾವ್ ಲೆಕ್ಕಾಧೀಕ್ಷಕರು (ಪ್ರಭಾರ ಮುಖ್ಯ ಲೆಕ್ಕಾಧಿಕಾರಿ) CE,PRED ಕೇಂದ್ರ ಕಛೇರಿ ಬೆಂಗಳೂರುರವರನ್ನು ಮೇಲೆ ಓದಲಾದ (2) ಸರ್ಕಾರದ ಆದೇಶದಲ್ಲಿ ಅನುಮತಿ ನೀಡಿದೆ, ಸದರಿಯವರು KCSRS ನಿಯಮ 451(1)ರನ್ವಯ 2ನೇ ಪ್ರವರ್ಗಕ್ಕೆ ಸೇರಿರುವುದರಿಂದ ವಿಮಾನ ಮೂಲಕ ಪ್ರಯಾಣ ಭತ್ಯೆ ಪಡೆಯಲು ಅರ್ಹರಿರುವುದಿಲ್ಲವಾದ್ದರಿಂದ ಸದರಿ ಅಧಿಕಾರಿಯವರು ವಿಮಾನ ಮೂಲಕ ಪ್ರಯಾಣ ಭತ್ಯೆಯನ್ನು ಪಡೆಯಲು ವಿಶೇಷ ಪ್ರಕರಣವೆಂದು ಪರಿಗಣಿಸಿ, ಸರ್ಕಾರದ ಅನುಮತಿ ನೀಡಬೇಕೆಂದು ಮೇಲೆ ಓದಲಾದ (3)ರಲ್ಲಿ CE,PRED ಬೆಂಗಳೂರುರವರು ವಿನಂತಿಸಿದ್ದಾರೆ. CE,PRED ರವರ ಪ್ರಸ್ತಾವನೆಯನ್ನು ಪರಿಗಣಿಸಿ ವಿಮಾನ ಪ್ರಯಾಣ ಭತ್ಯೆ ಪಡೆಯಲು ಅನುಮತಿ ನೀಡಲು ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 109 ಗ್ರಾನೀಸ(2)2014 ಬೆಂಗಳೂರು, ದಿನಾಂಕ:14.10.2014.**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ ಶ್ರೀ ಎಂ.ಜಿ. ನಾಗೇಶ್ವರರಾವ್ ಲೆಕ್ಕಾಧೀಕ್ಷಕರು (ಪ್ರಭಾರ ಮುಖ್ಯ ಲೆಕ್ಕಾಧಿಕಾರಿ)ರವರು ದಿನಾಂಕ:08.05.2014ರಂದು ನವದೆಹಲಿಯಲ್ಲಿ ನಡೆದ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯ ಸಭೆಗೆ ಹಾಜರಾಗಲು ವಿಮಾನದ ಮೂಲಕ ಪ್ರಯಾಣ ಮಾಡಿದ್ದನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಘಟನೋತ್ತರ ಮಂಜೂರಾತಿ ನೀಡಿದೆ.

2. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು ರವರ ಸಹಮತಿ ಸಂಖ್ಯೆ:ಗ್ರಾಅಪ/558/ಪಿಬಿಎಸ್/2014 ದಿನಾಂಕ:25.09.2014ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
**ಇಮೇಲ್:rk3452000@gmail.com**
**(ಫೋನ್ ನಂ:22032806, ಫ್ಯಾಕ್ಸ್ ನಂ:22203175)**

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು

3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ ಬೆಂ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ವಿಶೇಷಾಧಿಕಾರಿಗಳು(ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು,ಆರ್ಥಿಕ ಇಲಾಖೆ, ವಿಧಾನಸೌಧ ಬೆಂ.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ ಆನಂದರಾವ್ ವೃತ್ತ ಬೆಂಗಳೂರು.-09.
11. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, **PRED**, ಬೆಂಗಳೂರು-09.
12. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ.
13. ಆಯುಕ್ತರು, **RWSSD** ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ/ ಅಪರ ನಿರ್ದೇಶಕರು, (ಆರ್ಥಿಕ) **KRWSSA/SWSM** ಆಂತರಿಕ ಆರ್ಥಿಕ ಸಲಹೆಗಾರರು, **RDPR** ಇಲಾಖೆ, ಇವರುಗಳ ಆಪ್ತ ಸಹಾಯಕರು.
14. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
17. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.